ದಿನಾಂಕ: 02-02-2019 ರಂದು ಬೆಳಿಗ್ಗೆ 11-00 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ ಉತ್ತರ ಕನ್ನಡ, ಕಾರವಾರದ ಸಭಾಭವನದಲ್ಲಿ ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಸಂಭವಿಸಿರುವ ಹಾನಿ ಹಾಗೂ ಕೈಗೊಂಡ ಪರಿಹಾರ ಕ್ರಮಗಳ ಕುರಿತಂತೆ ಮಾನ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ನಡಾವಳಿ

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು

1. ಮಾನ್ಯ ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು
2. ಜಿಲ್ಲಾಧಿಕಾರಿಗಳು ಉತ್ತರ ಕನ್ನಡ, ಕಾರವಾರ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾಪಂಚಾಯತ ಉ.ಕ.,ಕಾರವಾರ
4. ಅಪರ ಜಿಲ್ಲಾಧಿಕಾರಿ ಉತ್ತರ ಕನ್ನಡ, ಕಾರವಾರ
5. ಉಪ ಕಾರ್ಯದರ್ಶಿಗಳು-1, ಜಿಲ್ಲಾ ಪಂಚಾಯತ ಉ.ಕ. ಕಾರವಾರ
6. ಉಪ ಕಾರ್ಯದರ್ಶಿಗಳು-2, ಜಿಲ್ಲಾ ಪಂಚಾಯತ ಉ.ಕ. ಕಾರವಾರ
7. ಯೋಜನಾ ನಿರ್ದೇಶಕರು ಜಿಲ್ಲಾ ನಗರಾಭಿವೃದ್ಧಿಕೋಶ ಕಾರವಾರ.
8. ಕಾರ್ಯನಿರ್ವಾಹಕ ಇಂಜೀನಿಯರ, ಪಂ.ರಾ.ಇಂ.ವಿಭಾಗ ಕಾರವಾರ/ಶಿರಸಿ ರವರ ಪ್ರತಿನಿಧಿ
9. ಕಾರ್ಯನಿರ್ವಾಹಕ ಇಂಜೀನಿಯರ, ಲೋ.ಬಂ.ಮತ್ತು ಒ ಜ ಸಾ ಇಲಾಖೆ ವಿಭಾಗ ಕಾರವಾರ/ಶಿರಸಿ ರವರ ಪ್ರತಿನಿಧಿ
10. ಯೋಜನಾ ವ್ಯವಸ್ಥಾಪಕರು, ಜಿಲ್ಲಾ ನಿರ್ಮಿತಿ ಕೇಂದ್ರ, ಕಾರವಾರ
11. ಅಧೀಕ್ಷಕ ಅಭಿಯಂತರರು, ಹೆಸ್ಕಾಂ ಶಿರಸಿ ರವರ ಪ್ರತಿನಿಧಿ
11. ಕಾರ್ಯನಿರ್ವಾಹಕ ಇಂಜೀನಿಯರ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ ಕಾರವಾರ
13. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಕಾರವಾರ
14. ಉಪ ನಿರ್ದೇಶಕರು ತೋಟಗಾರಿಕೆ ಇಲಾಖೆ ಶಿರಸಿ ರವರ ಪ್ರತಿನಿಧಿ
15. ಉಪ ನಿರ್ದೇಶಕರು ಪಶುಸಂಗೋಪನೆ ಇಲಾಖೆ ಕಾರವಾರ.
16. ಸಹಾಯಕ ಕಮೀಷನರ ಉಪವಿಭಾಗ ಕಾರವಾರ/ಭಟ್ಕಳ/ಕುಮಟಾ/ಶಿರಸಿ/

ಪ್ರಾರಂಭದಲ್ಲಿ ಜಿಲ್ಲಾಧಿಕಾರಿಗಳು ಸಭೆಗೆ ಆಗಮಿಸಿದ ಎಲ್ಲಾ ಅಧಿಕಾರಿಗಳಿಗೆ ಸ್ವಾಗತ ಕೋರಿ ಸಭೆಯ ಕಾರ್ಯಕಲಾಪವನ್ನು ನಡೆಸಿಕೊಡಲು ಮಾನ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನು ಕೋರಿಕೊಂಡರು.

ಜಿಲ್ಲಾಧಿಕಾರಿಗಳು ಜಿಲ್ಲೆಯ ಕುರಿತು ವಿವರಿಸುತ್ತ ಜಿಲ್ಲೆಯಲ್ಲಿ 12 ತಾಲೂಕುಗಳಿದ್ದು, 4 ಉಪ ವಿಭಾಗಗಳು, 35 ಹೋಬಳಿಗಳು, 231 ಗ್ರಾಮ ಪಂಚಾಯತಿಗಳು ಮತ್ತು 1289 ಕಂದಾಯ ಗ್ರಾಮಗಳಿರುವುದಾಗಿ ಸಭಗೆ ವಿವರಿಸಿದರು. ಮುಂದುವರೆದು ಉತ್ತರ ಕನ್ನಡ ಜಿಲ್ಲೆಯು ಭೌಗೋಳಿಕವಾಗಿ 10,27,733 ಹೆಕ್ಟರ್ ಪ್ರದೇಶದಲ್ಲಿ ವ್ಯಾಪಿಸಿದ್ದು, ಅದರಲ್ಲಿ 1,12,074 ಹೆಕ್ಟರ್ ಕ್ಷೇತ್ರ ನಿವ್ವಳ ಸಾಗುವಳಿ ಕ್ಷೇತ್ರವಾಗಿರುತ್ತದೆ ಎಂದು ತಿಳಿಸಿದರು.

2018-19 ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಕಾರವಾರ, ಭಟ್ಕಳ, ಯಲ್ಲಾಪುರ, ಹಳಿಯಾಳ ಮತ್ತು ಮುಂಡಗೋಡ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿದ್ದು, ಮುಂದಿನ ದಿನಗಳಲ್ಲಿ ಉಂಟಾಗಬಹುದಾದ ಕುಡಿಯುವ ನೀರಿನ ಸಮಸ್ಯೆಯನ್ನು ಸಮರ್ಥವಾಗಿ ನಿರ್ವಹಿಸುವ ನಿಟ್ಟಿನಲ್ಲಿ ದಿನಾಂಕ: 10-01-2019 ರಂದು ಸಂಬಂಧಪಟ್ಟ

ಇಲಾಖೆಗಳ ಮುಖ್ಯಸ್ಥರ ಸಭೆಯನ್ನು ಕರೆದು ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ. ಅದಲ್ಲದೇ ಸದರಿ ವಿಷಯದ ಕುರಿತು ದಿನಾಂಕ: 17-01-2019 ರಂದು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜೊತೆ ವಿಡಿಯೋ ಸಂವಾದದ ಮೂಲಕ ಚರ್ಚೆ ಮಾಡಿ ಈ ಕೆಳಗಿನಂತೆ ನಿರ್ದೇಶನಗಳನ್ನು ನೀಡಲಾಗಿದೆ.

- ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ಬಂದಲ್ಲಿ ದೂರು ಬಂದ 24 ಘಂಟೆಯೊಳಗಾಗಿ ಸದ್ರಿ ಸ್ಥಳಕ್ಕೆ ಸ್ಥಳೀಯ ತಹಶೀಲ್ದಾರರು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಹಣಾ ಅಧಿಕಾರಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗ್ರಾ.ಕು.ನೀ ಮತ್ತು ನೈ ಇಲಾಖೆ ರವರು ಬೇಟಿ ನೀಡುವುದು.
- ಸದ್ರಿ ಸ್ಥಳದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಖಾಸಗಿ ಬೋರವೆಲ್ ನ್ನು ಬಾಡಿಗೆ ಪಡೆದು ನೀರು ಪೂರೈಸುವುದು, ಅದು ಸಾಧ್ಯವಾಗದಿದ್ದಲ್ಲಿ ಒಂದು ವಾರದವರೆಗೆ ಟ್ಯಾಂಕರ ಮೂಲಕ ನೀರನ್ನು ಸರಬರಾಜು ಮಾಡುವುದು. ಒಂದು ವೇಳೆ ಒಂದು ವಾರಕ್ಕಿಂತ ಹೆಚ್ಚು ದಿನ ಕುಡಿಯುವ ನೀರನ್ನು ಟ್ಯಾಂಕರ ಮೂಲಕ ಪೂರೈಸುವುದು ಅವಶ್ಯವೆಂದು ಕಂಡುಬಂದಲ್ಲಿ ಸಹಾಯಕ ಕಮೀಷನರ್ ರವರ ಅನುಮತಿ ಪಡೆದುಕೊಂಡು ನೀರನ್ನು ಪೂರೈಸುವುದು. ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಿದ ಕುರಿತು Drinking water Monitoring System ನಲ್ಲಿ ವಿವರವನ್ನು ಅಳವಡಿಸುವುದು ಹಾಗೂ ಕುಡಿಯುವ ನೀರನ್ನು ಪೂರೈಸಿದ ವೆಚ್ಚವನ್ನು ಪಾವತಿಸಲು ಕ್ರಮವಹಿಸುವುದು.
- ಒಂದು ವಾರದೊಳಗಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಬಗೆ ಹರಿಸಲು ನಿಟ್ಟಿನಲ್ಲಿ ಕುಡಿಯುವ ನೀರಿನ ಮೂಲಗಳ ದುರಸ್ಥಿ ಅಥವಾ ಹೊಸ ಮೂಲಗಳನ್ನು ಸೃಷ್ಟಿಸುವ ಸಂಬಂಧ ಕಾಮಗಾರಿಗಳ ಕ್ರೀಯಾಯೋಜನೆಯನ್ನು ತಯಾರಿಸಿ ಜಿಲ್ಲಾಧಿಕಾರಿಗಳ/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿ.ಪಂ. ಉ.ಕ. ಕಾರವಾರ ರವರ ಅನುಮತಿಯನ್ನು ಪಡೆದುಕೊಂಡು ಕಾಮಗಾರಿಗಳನ್ನು ಕೈಗೊಳ್ಳುವುದು.
- ನೀರಿನ ಹೊಸ ಮೂಲಗಳ ಸೃಜನೆಗೆ ಸಂಬಂಧಿಸಿದ ಕಾಮಗಾರಿಗಳಿಗೆ ಜಿಲ್ಲಾ ಪಂಚಾಯತಿಯಿಂದ ಹಾಗೂ ಈಗಿರುವ ಕುಡಿಯುವ ನೀರಿನ ಮೂಲಗಳ ದುರಸ್ಥಿಗೆ ಸಂಬಂಧಿಸಿದ ಕಾಮಗಾರಿಗಳಿಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಅನುದಾನ ನೀಡಲಾಗುವುದು.

ಜಿಲ್ಲೆಯಲ್ಲಿ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಲು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕಾ ಕೇಂದ್ರಗಳಲ್ಲಿ ಕಂಟ್ರೋಲ್ ರೂಮ್ ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ಸಭೆಗೆ ತಿಳಿಸಿದರು

1. <u>2018-19 ನೇ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದ ಸಂಭವಿಸಿದ ಹಾನಿ ಹಾಗೂ ಕೈಗೊಂಡ ಪರಿಹಾರ ಕ್ರಮಗಳು</u>

ಜಿಲ್ಲಾಧಿಕಾರಿಗಳು 2018-19ನೇ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದಾಗಿ 08 ಜನ ಮೃತಪಟ್ಟಿದ್ದು ಮೃತರ ವಾರಸುದಾರರಿಗೆ ಎಸ್.ಡಿ.ಆರ್.ಎಫ್/ ಎನ್ .ಡಿ.ಆರ್.ಎಫ್, ನಿಧಿಯಿಂದ ತಲಾ ರೂ. 4 ಲಕ್ಷದಂತೆ, ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ತಲಾ ರೂ. 1 ಲಕ್ಷದಂತೆ 8 ಜನ ಮೃತರ ವಾರಸುದಾರರಿಗೆ ಹಾಗೂ ಪ್ರಧಾನ ಮಂತ್ರಿ ಪರಿಹಾರ ನಿಧಿಯಿಂದ ತಲಾ ರೂ. 2 ಲಕ್ಷ ದಂತೆ 7 ಜನ ಮೃತರ ವಾರಸುದಾರರಿಗೆ ಪರಿಹಾರ ವಿತರಿಸಲಾಗಿದೆ ಎಂದು ಸಭಾಧ್ಯಕ್ಷರಿಗೆ ವಿವರಿಸಿದರು.

ಪ್ರಕೃತಿ ವಿಕೋಪದಿಂದ ಸಂಭವಿಸಿದ ಜಾನುವಾರು ಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ 37 ಪ್ರಕರಣಗಳು ವರದಿಯಾಗಿದ್ದು ಎಲ್ಲಾ 37 ಪ್ರಕರಣಗಳಿಗೆ ಒಟ್ಟು ರೂ. 9.45 ಲಕ್ಷ ಪರಿಹಾರವನ್ನು ವಿತರಿಸಲಾಗಿದೆ. ಪ್ರಕೃತಿ ವಿಕೋಪದಿಂದ ಒಟ್ಟು 514 ಮನೆ ಬಿದ್ದ ಪ್ರಕರಣಗಳು ವರದಿಯಾಗಿದ್ದು, ಎಲ್ಲಾ 514 ಪ್ರಕರಣಗಳಿಗೆ ಸಂಬಂಧಿಸಿದಂತೆ ರೂ. 61.88 ಲಕ್ಷ ಪರಿಹಾರವನ್ನು ವಿತರಿಸಲಾಗಿದೆ. ಪ್ರಕೃತಿ ವಿಕೋಪದಿಂದ ಉಂಟಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ

294.95 ಹೆಕ್ಟರ್ ಕೃಷಿ ಬೆಳೆ ಹಾನಿಯಾಗಿದ್ದು ರೂ. 19.37 ಲಕ್ಷ ಪರಿಹಾರವನ್ನು ಹಾಗೂ 56.26 ಹೆಕ್ಟರ್ ತೋಟಗಾರಿಕೆ ಬೆಳೆ ಹಾನಿಯಾಗಿದ್ದು ರೂ. 3.935 ಲಕ್ಷ ಪರಿಹಾರವನ್ನು ವಿತರಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

2018-19 ನೇ ಸಾಲಿನಲ್ಲಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ಜಿಲ್ಲೆಯಲ್ಲಿ 271 ಶಾಲೆಗಳ ದುರಸ್ತಿ ಕಾಮಗಾರಿಗಳನ್ನು ರೂ. 189.29 ಅಂದಾಜು ಮೊತ್ತದಲ್ಲಿ ಕೈಗೊಂಡಿದ್ದು, ಅದರಲ್ಲಿ 199 ಕಾಮಗಾರಿಗಳು ಪೂರ್ಣಗೊಂಡಿದ್ದು, ಬಾಕಿ 72 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಅದೇ ರೀತಿ 105 ಅಂಗನವಾಡಿ ಕೇಂದ್ರಗಳ ದುರಸ್ಥಿ ಕಾಮಗಾರಿಗಳನ್ನು ಅಂದಾಜು ಮೊತ್ತ 68.47 ಲಕ್ಷದಲ್ಲಿ ಕೈಗೊಂಡಿದ್ದು 100 ಕಾಮಗಾರಿಗಳು ಮುಕ್ತಾಯಗೊಂಡಿದ್ದು ಬಾಕಿ 5 ಕಾಮಗಾರಿಗಳು ಪ್ರಗತಿಯಲ್ಲಿರುವುದಾಗಿ ಹಾಗೂ ಗ್ರಾಮ ಪಂಚಾಯತ ಕಟ್ಟಡ ದುರಸ್ಥಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ 23 ಗ್ರಾಮ ಪಂಚಾಯತ ಕಟ್ಟಡಗಳ ದುರಸ್ಥಿ ಕಾಮಗಾರಿಗಳನ್ನು ಅಂದಾಜು ಮೊತ್ತ 22.87 ಲಕ್ಷದಲ್ಲಿ ಕೈಗೊಂಡಿದ್ದು ಎಲ್ಲ 23 ಕಾಮಗಾರಿಗಳು ಪೂರ್ಣಗೊಂಡಿರುವುದಾಗಿ ಜಿಲ್ಲಾಧಿಕಾರಿಗಳು ಸಭೆಗೆ ವಿವರಿಸಿದರು.

2018-19 ನೇ ಸಾಲಿನಲ್ಲಿ ಜಿಲ್ಲೆಗೆ ಪ್ರವಾಹ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು 576.00 ಲಕ್ಷ ಅನುದಾನ ಬಿಡುಗಡೆಯಾಗಿದ್ದು ಸದರಿ ಅನುದಾನದಲ್ಲಿ ಅಂದಾಜು ಮೊತ್ತ ರೂ. 510 ಲಕ್ಷ ದಲ್ಲಿ 160 ಕಾಮಗಾರಿಗಳನ್ನು ಕೈಗೊಳ್ಳಲು ಮಂಜೂರಾತಿ ನೀಡಲಾಗಿದೆ. ಮಂಜೂರಾತಿ ನೀಡಲಾದ 160 ಕಾಮಗಾರಿಗಳು ಪ್ರಗತಿಯಲ್ಲಿವೆ. ಇದಲ್ಲದೇ ಕರಾವಳಿ ಭಾಗದ ಪ್ರತಿ ತಾಲೂಕಿನಲ್ಲಿ ರೂ. 2.00 ಕೋಟಿ ಮೊತ್ತದಲ್ಲಿ ಹಾಗೂ ಘಟ್ಟದ ಮೇಲಿನ ತಾಲೂಕುಗಳಲ್ಲಿ ರೂ. 1.50 ಕೋಟಿ ಮೊತ್ತದಲ್ಲಿ ಶಾಲೆ, ಅಂಗನವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಕ್ರೀಯಾಯೋಜನೆಯನ್ನು ತಯಾರಿಸಿ ಶಾಸಕರ ಅಧ್ಯಕ್ಷತೆಯ ಟಾಸ್ಕ ಪೋರ್ಸ ಸಮಿತಿಯ ಅನುಮೋದನೆ ಪಡೆಯಲು ಸೂಚಿಸಲಾಗಿದೆ ಎಂದು ಜಿಲಾಧಿಕಾರಿಗಳು ಸಭೆಗೆ ವಿವರಿಸಿದರು.

2. ಮಳೆ ಬೆಳೆ ಪರಿಸ್ಥಿತಿ

ಉತ್ತರ ಕನ್ನಡ ಜಿಲ್ಲೆಯಲ್ಲಿ 2018-19 ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ವಾಡಿಕೆ ಸರಾಸರಿ ಮಳೆ 2457.0 ಮಿ.ಮೀ.ಇದ್ದು ವಾಸ್ತವವಾಗಿ 2658.0 ಮಿ.ಮೀ ಮಳೆಯಾಗಿರುತ್ತದೆ. ಹಿಂಗಾರು ಹಂಗಾಮಿನಲ್ಲಿ ವಾಡಿಕೆ ಮಳೆ 198.0 ಮಿ.ಮೀ ಇದ್ದು ವಾಸ್ತವವಾಗಿ 115.0 ಮಿ.ಮೀ. ಮಳೆಯಾಗಿದ್ದು ಶೇ.42 ರಷ್ಟು ಕೊರತೆಯಾಗಿರುತ್ತದೆ. ಜಿಲ್ಲೆಯಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರದ ದಾಸ್ತಾನು ಇದ್ದು ಯಾವುದೇ ಕೊರತೆಯಾಗುವುದಿಲ್ಲ, ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಬೆಳೆಗಳ ಸದ್ಯದ ಪರಿಸ್ಥಿತಿ ಉತ್ತಮವಾಗಿದ್ದು ಈವರೆಗೆ ಜಿಲ್ಲೆಯಲ್ಲಿ ಕೃಷಿ ಬೆಳೆ ಹಾನಿಯಾದ ವರದಿಯಾಗಿರುವುದಿಲ್ಲವಾಗಿ ಹಾಗೂ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ದಿನಾಂಕ: 10-1-2019 ರಂದು ನಡೆದ ಸಭೆಯಲ್ಲಿ ಸೂಚಿಸಿದಂತೆ ಒಂದು ವೇಳೆ ಬೆಳೆ ಹಾನಿಯಾಗಿದ್ದಲ್ಲಿ ರೈತರು ನೇರವಾಗಿ ಮಾಹಿತಿಯನ್ನು ರೈತ ಸಂಪರ್ಕ ಕೇಂದ್ರಗಳಿಗೆ ಅಥವಾ ಕೃಷಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗಳಿಗೆ ನೀಡುವಂತೆ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. 2017-18ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಜಿಲ್ಲೆಯಲ್ಲಿ 43473 ರೈತರಿಗೆ ರೂ. 3151.61 ಲಕ್ಷ ಪರಿಹಾರ ಮೊತ್ತ ಬಂದಿರುವುದಾಗಿ ಹಾಗೂ 2018-19 ನೇ ಸಾಲಿನಲ್ಲಿ 55359 ರೈತರು ಬೆಳೆ ವಿಮಾ ಯೋಜನೆಯಡಿ ನೊಂದಾಯಿತರಾಗಿರುತ್ತಾರೆ ಎಂದು ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕರು ಕೃಷಿ ಇಲಾಖೆ ಕಾರವಾರರವರು ವಿವರಿಸಿದರು.

ಮುಂದುವರೆದು, 2018 ನೇ ಸಾಲಿನಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಸಂಬಂದಿಸಿದಂತೆ 7 ಪ್ರಕರಣಗಳು ವರದಿಯಾಗಿದ್ದು, 2 ಪ್ರಕರಣಗಳು ಅಂಗೀಕೃತಗೊಂಡಿದ್ದು ತಲಾ ರೂ. 5.00 ಲಕ್ಷ ಪರಿಹಾರವನ್ನು ವಿತರಿಸಲಾಗಿದೆ, 4